ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ವಾರ್ತೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 10/11/2019

# ಸುಪ್ರೀಂಕೋರ್ಟ್ ಇತಿಹಾಸದಲ್ಲೇ ಮೊದಲ ಬಾರಿ ಶನಿವಾರ ತೀರ್ಪು!

10/11/19

ನವದೆಹಲಿ: ಕೋರ್ಟ್ ಕಲಾಪಗಳು ಸಾಮಾನ್ಯವಾಗಿ ಸೋಮವಾರದಿಂದ ಶುಕ್ರವಾರದವರೆಗೆ ನಡೆಯುತ್ತವೆ. ಶನಿವಾರ ಮತ್ತು ಭಾನುವಾರ ಮತ್ತು ರಜಾ ದಿನಗಳಂದು ಯಾವುದೇ ಪ್ರಕರಣಗಳ ಬಗ್ಗೆ ವಿಚಾರಣೆ



ನಡೆಸುವುದಿಲ್ಲ. ವಿಶೇಷ ಪ್ರಕರಣಗಳ ಕುರಿತು ವಾರಾಂತ್ಯ, ರಜೆ ವೇಳೆಯೂ ವಿಚಾರಣೆ ನಡೆದಿದ್ದಿದೆ. ಆದರೆ, ರಾಮಜನ್ಮಭೂಮಿ ಭೂ ವಿವಾದ ಕುರಿತು ಶನಿವಾರದಂದೇ ಕೋರ್ಟ್ ತೀರ್ಪು ಹೊರಡಿಸಿದೆ. ಇದು 69 ವರ್ಷಗಳ ಸುಪ್ರೀಂಕೋರ್ಟ್ ಇತಿಹಾಸದಲ್ಲೇ ಇದೇ ಮೊದಲ ತೀರ್ಪಾಗಿದೆ. ಅಸಾಧಾರಣ ಪ್ರಕರಣಗಳ ಕುರಿತು ಕೋರ್ಟ್ ರಜೆ ದಿನಗಳಲ್ಲಿ ವಿಚಾರಣೆ ನಡೆಸಿದೆ. ಆದರೆ, ನನಗೆ ತಿಳಿದ ಮಟ್ಟಿಗೆ ಶನಿವಾರದಂದು ತೀರ್ಪು ನೀಡಿದ ಬಗ್ಗೆ ಯಾವುದೇ ಉದಾಹರಣೆಗಳು ಇಲ್ಲ. ಅಯೋಧ್ಯೆ, ರಾಮಜನ್ಮಭೂಮಿ ಕುರಿತು ಶನಿವಾರ ನೀಡಿದ ತೀರ್ಪೇ ಮೊದಲು ಎಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ರಂಜನ್ ಗೊಗೋಯ್ ಅವರ ಆಪ್ತ ಕಾರ್ಯದರ್ಶಿ ಎಚ್.ಕೆ.ಜುನೇಜಾ ತಿಳಿಸಿದ್ದಾರೆ. ಅಲ್ಲದೇ, 1992ರಲ್ಲಿ ಬಾಬ್ರಿ ಮಸೀದಿ ಧ್ವಂಸ ವೇಳೆ ಅಂದಿನ ಮುಖ್ಯ ನ್ಯಾಯಮೂರ್ತಿಯಾಗಿದ್ದ ಎಂ.ಎನ್. ವೆಂಕಟಾಚಲಯ್ಯ ಅವರು ತಮ್ಮ ನಿವಾಸದಲ್ಲಿ ಸಂಜೆ ವೇಳೆ ಪ್ರಕರಣ ಕುರಿತು ವಿಚಾರಣೆ ನಡೆಸುತ್ತಿದ್ದರು ಎಂದು ಇದೇ ವೇಳೆ ಹೇಳಿದ್ದಾರೆ.